ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಕಂಪ್ಯೂಟರ್ ಅಳವಡಿಕೆ

2589 (2935) ಪ್ರಭಾಕರ ಕೆ. ಬಂಗೇರಾ (ಬೆಳ್ತಂಗಡಿ) :— ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) 2001-2002ನೇ ಸಾಲಿನಲ್ಲಿ ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಪೂರ್ಣ ಪ್ರಮಾಣದಲ್ಲಿ ಕಂಪ್ಯೂಟರ್‌ಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುವುದೇ ಇದ್ದಲ್ಲಿ, ಅದರ ವಿವರಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು. 2001-2002 ನೇ ಸಾಲಿನಲ್ಲಿ 1000 ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ವಿಶ್ವಬ್ಯಾಂಕ್ ನೆರವಿನೊಂದಿಗೆ ರಾಜ್ಯದ 5000 ಸರ್ಕಾರಿ ಪ್ರೌಢ:ಪ್ರಾಥಮಿಕ ಶಾಲೆಗಳ ಕಂಪ್ಯೂಟರ್ ಶಿಕ್ಷಣ ನೀಡಲು ಉದ್ದೇಶಿಸಲಾಗಿದೆ.

ಬಾಗಲಕೋಟೆ ನಗರದಲ್ಲಿ ಹೊಸದಾಗಿ ಜಿಲ್ಲಾ ಆಸ್ಪತ್ರೆಯನ್ನು ಪ್ರಾರಂಭ ಮಾಡುವುದು

2590 (2956) ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಾಗಲಕೋಟೆ ನಗರದಲ್ಲಿ ಹೊಸದಾಗಿ ಜಿಲ್ಲಾ ಆಸ್ಪತ್ರೆಯನ್ನು ಎಂದು ಪ್ರಾರಂಭಿಸಲಾಗುವುದು?

ಆ) ಜಿಲ್ಲಾ ಆಸ್ಪತ್ರೆಯನ್ನು ಪ್ರಾರಂಭಿಸದೇ ಇರಲು ಕಾರಣಗಳೇನು (ವಿವರ ನೀಡುವುದು)

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ಬಾಗಲಕೋಟೆ ನಗರದಲ್ಲಿ 250 ಹಾಸಿಗೆಗಳ ಹೊಸ ಜಿಲ್ಲಾ ಆಸ್ಪತ್ರೆ ಕಾಮಗಾರಿಯನ್ನು ವಿಶ್ವಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಯೋಜನೆಯಡಿ ಕೈಗೊಳ್ಳಲಾಗಿದೆ ಈ ಆಸ್ಪತ್ರೆ ಕಾಮಗಾರಿಯನ್ನು ರಾಷ್ಟ್ರೀಯ ಸ್ಪರ್ಧಾತ್ಮಕ ಗುತ್ತಿಗೆ ಕರೆದು ರೂ. 456.05 ಲಕ್ಷಗಳಿಗೆ ಗುತ್ತಿಗೆ ನೀಡಿದ್ದು, ಕಾಮಗಾರಿಯನ್ನು ದಿನಾಂಕ 22.3.1999 ರಂದು ಪ್ರಾರಂಭಿಸಲಾಗಿದೆ. ಸಣ್ಣ ಪುಟ್ಟ ಕೆಲಸವನ್ನು ಹೊರತುಪಡಿಸಿ ಉಳಿದಂತೆ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. ಬಾಕಿ ಇರುವ ಕೆಲಸಗಳನ್ನು

ಜುಲೈ 2001ರ ಅಂತ್ಯಕ್ಕೆ ಪೂರ್ಣಿ ಕಟ್ಟಡವನ್ನು ಹಸ್ತಾಂತರಿಸಲು ಉದ್ದೇಶಿಸಿದೆ. ಆಸ್ಪತ್ರೆ ಕಟ್ಟಡವನ್ನು ವಹಿಸಿಕೊಟ್ಟ ನಂತರ ಹೊಸ ಜಿಲ್ಲಾ ಆಸ್ಪತ್ರೆ ಕಾರ್ಯಾರಂಭಗೊಳ್ಳುವುದು.

ಅ) ಬಾಗಲಕೋಟೆಯಲ್ಲಿ ಹಾಲಿ ಇರುವ ಆಸ್ಪತ್ರೆ ಕಟ್ಟಡವು ಆಲಮಟ್ಟಿ ಜಲಾಶಯದ ಹಿನ್ನಿರಿನಲ್ಲಿ ಮುಳುಗಡೆಯಾಗುವುದರಿಂದ ಹಾಗೂ ಬಾಗಲಕೋಟೆಯು ಈಗ ಹೊಸ ಜಿಲ್ಲಾ ಕೇಂದ್ರವಾಗಿರುವುದರಿಂದಲೂ, ಬಾಗಲಕೋಟೆ ನಗರದಲ್ಲಿ 250 ಹಾಸಿಗೆಗಳ ಹೊಸ ಜಿಲ್ಲಾ ಆಸ್ಪತ್ರೆಯನ್ನು ನಿರ್ಮಿಸುವ ಅಗತ್ಯವಿತ್ತು. ಆದ್ದರಿಂದ ಕಾರ್ಯಾರಂಭಗೊಳ್ಳಲು ಸ್ವಲ್ಪ ನಿಧಾನವಾಗಿದೆ. ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ವಿಶ್ವಬ್ಯಾಂಕ್ ಅನುಮೋದನೆ ಪಡೆದು ಈಗ ಹೊಸ ಜಿಲ್ಲಾ ಆಸ್ಪತ್ರೆಯನ್ನು ನಿರ್ಮಿಸಲಾಗುತ್ತಿದೆ. ಮೇಲೆ ವಿವರಿಸಿರುವಂತೆ ಆಸ್ಪತ್ರೆ ಕಟ್ಟಡ ಕಾಮಗಾರಿಗಳು ಪೂರ್ಣಗೊಳ್ಳುವ ಹಂತದಲ್ಲಿದೆ. ಆಸ್ಪತ್ರೆ ವಹಿಸಿಕೊಟ್ಟ ನಂತರ ಹೊಸ ಜಿಲ್ಲಾ ಆಸ್ಪತ್ರೆ ಕಾರ್ಯಾರಂಭಗೊಳ್ಳುವುದು.

ಬಾಗಲಕೋಟೆ ಜಿಲ್ಲೆಯಲ್ಲಿ ಉರ್ದು ಪ್ರಾಥಮಿಕ ಶಾಲೆ

2591(2957) ಶ್ರೀ ಪೂಜಾರ್ ಪಿ.ಹೆಚ್. (ಬಾಗಲಕೋಟೆ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಾಗಲಕೋಟೆ ಜಿಲ್ಲೆಯಲ್ಲಿ ಈಗ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಗಳೆಷ್ಟು?

ಆ) ಈ ಎಲ್ಲಾ ಉರ್ದು ಪ್ರಾಥಮಿಕ ಶಾಲೆಗಳಲ್ಲಿ ಕನ್ನಡ ಕಲಿಸುವ ಶಿಕ್ಷಕರನ್ನು ನೇಮಿಸಲಾಗಿದೆಯೇ?

ಇ) ಹಾಗಿಲ್ಲದಿದ್ದರೆ ಕಾರಣಗಳೇನು. ವಿವರಣೆ ಕೊಡುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಬಾಗಲಕೋಟೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಗಳು.

೧) ಸರ್ಕಾರಿ ಕಿರಿಯ ಉರ್ದು ಪ್ರಾಥಮಿಕ ಶಾಲೆಗಳು	೯೬
೨) ಸರ್ಕಾರಿ ಹಿರಿಯ ಉರ್ದು ಪ್ರಾಥಮಿಕ ಶಾಲೆಗಳು	೬೭
ಒಟ್ಟು	೧೬೩